# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 573 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 11/12/2020 |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಕರ್ತವ್ಯಗಳೇನು; (ವಿವರ ನೀಡುವುದು) | ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ನಿರ್ವಹಿಸುತ್ತಿರುವ ಕರ್ತವ್ಯಗಳ ವಿವರವನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| ಆ. | ರಾಜ್ಯದಲ್ಲಿರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಮಂಜೂರಾಗಿರುವ ಅಂಗನವಾಡಿ ಕಾರ್ಯಕರ್ತೆಯರು / ಸಹಾಯಕಿಯರ ಸಂಖ್ಯೆ ಈ ಕೆಳಗಿನಂತಿದೆ.<br><br>ಅಂಗನವಾಡಿ ಕಾರ್ಯಕರ್ತೆಯರು – 65911<br>ಅಂಗನವಾಡಿ ಸಹಾಯಕಿಯರು – 62580 |
| ಇ. | ಸದರಿಯವರಿಗೆ ಮಾಸಿಕ ನೀಡಲಾಗುತ್ತಿರುವ ಗೌರವಧನವೆಷ್ಟು; ರಾಜ್ಯ ಮತ್ತು ಕೇಂದ್ರ ಸರ್ಕಾರದ ಪಾಲು ಎಷ್ಟು; (ಪ್ರತ್ಯೇಕವಾಗಿ ವಿವರ ನೀಡುವುದು) | • ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಸಿಕ ಗೌರವಧನ ರೂ.10,000/-<br>• ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಸಿಕ ಗೌರವಧನ ರೂ.6,250/-<br>• ಅಂಗನವಾಡಿ ಸಹಾಯಕಿಯರಿಗೆ ಮಾಸಿಕ ಗೌರವಧನ ರೂ. 5,250/-<br><br>ರಾಜ್ಯ ಮತ್ತು ಕೇಂದ್ರ ಸರ್ಕಾರದ ಪಾಲಿನ ವಿವರಗಳನ್ನು ಅನುಬಂಧ-2ರಲ್ಲಿ ಒದಗಿಸಲಾಗಿದೆ. |
| ಈ. | ರಾಜ್ಯದಲ್ಲಿ ಸ್ವಂತ ಕಟ್ಟಡ ಮತ್ತು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ? | ರಾಜ್ಯದಲ್ಲಿ ಸ್ವಂತ ಕಟ್ಟಡ ಮತ್ತು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಈ ಕೆಳಗಿನಂತಿದೆ.<br><br>ಸ್ವಂತ ಕಟ್ಟಡ : 44894<br>ಬಾಡಿಗೆ ಕಟ್ಟಡ : 11801 |

(ಶಶಿಕಲಾ. ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತುವಿಕಲಚೇತನರ,
ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ :ಮಮಇ 232 ಐಸಿಡಿ 2020

## ಅನುಬಂಧ-1

### ಅಂಗನವಾಡಿ ಕಾರ್ಯಕರ್ತೆಯ ಕರ್ತವ್ಯಗಳು :

- ಜನ ಸಮುದಾಯದ ಸಮೀಕ್ಷೆಯನ್ನು ಕೈಗೊಂಡು ಸಹಾಯ ಅಗತ್ಯವಾಗಿರುವಂತವರ ವಿವರ ಸಂಗ್ರಹಿಸುವುದು. 6 ವರ್ಷದ ಕೆಳಗಿನ ಮಕ್ಕಳ ಸಂಖ್ಯೆ, ಗರ್ಭಿಣಿ ಮತ್ತು ಹಾಲುಣಿಸುತ್ತಿರುವ ತಾಯಂದಿರು, ಇವುಗಳನ್ನು ಸಂಗ್ರಹಿಸಬೇಕು. ಕುಟುಂಬಗಳ ಸಂಖ್ಯೆ, ಕುಟುಂಬದಲ್ಲಿ ಸದಸ್ಯರ ಸಂಖ್ಯೆ, ಕುಟುಂಬದ ಆದಾಯ ಇವುಗಳನ್ನು ಸಂಗ್ರಹಿಸಬೇಕು. ಮುಖ್ಯ ಅಂಕಿ-ಅಂಶಗಳಾದ ಜನನ ಮರಣಗಳ ದಾಖಲೆಗಳನ್ನು ಇಡಬೇಕು.
- 3 ಮತ್ತು 6 ವರ್ಷಗಳ ನಡುವಣ ಮಕ್ಕಳ ಶಾಲಾ ಪೂರ್ವ ಶಿಕ್ಷಣವನ್ನು ಕೈಗೊಳ್ಳಬೇಕು.
- 0-6 ವರ್ಷಗಳ ನಡುವಿನ ಮಕ್ಕಳ ಮತ್ತು ಗರ್ಭಿಣಿ ಹಾಗೂ ಹಾಲುಣಿಸುತ್ತಿರುವ ತಾಯಂದಿರಿಗೆ ಅಧಿಕ ಪೋಷಕಾಂಶ ಇರುವ ಆಹಾರವನ್ನು ಒದಗಿಸುವುದು.
- ಪ್ರಾಥಮಿಕ ಆರೋಗ್ಯ ಹಾಗೂ ಪ್ರಥಮ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸುವುದು.
- ರೋಗ ನಿರೋಧಕ ಚುಚ್ಚುಮದ್ದು ಮತ್ತು ಆರೋಗ್ಯ ತಪಾಸಣೆ ಮಾಡುವಲ್ಲಿ ಆರೋಗ್ಯ ಸಿಬ್ಬಂದಿಗೆ ಸಹಾಯ ಮಾಡುವುದು.
- ಪ್ರಬಲವಾಗಿ ನ್ಯೂನ ಪೋಷಣೆಗೊಳಗಾದ, ಪೋಷಕಾಂಶದ ಅಗತ್ಯವುಳ್ಳ, ಅನಾರೋಗ್ಯ ಉಂಟಾದ, ಅಪಾಯದಲ್ಲಿರುವ ಮಕ್ಕಳನ್ನು, ಅಂಟುರೋಗ ಇರುವ ರೋಗಿಗಳನ್ನು ತಜ್ಞ ವೈದ್ಯರಲ್ಲಿಗೆ ಕಳುಹಿಸಬೇಕು.
- ಅಂಗನವಾಡಿ ಕೇಂದ್ರಕ್ಕೆ ಬರುವ ಗರ್ಭಿಣಿ ಮತ್ತು ಹಾಲುಣಿಸುತ್ತಿರುವ ತಾಯಂದಿರಿಗೆ ಅಂಗನವಾಡಿ ಕಾರ್ಯಕರ್ತರು ಮನೆ ಭೇಟಿ ಮಾಡುವ ವೇಳೆಯಲ್ಲಿ ಮತ್ತು ಶಿಕ್ಷಣ ಕಾರ್ಯಕ್ರಮದ ಕಾಲದಲ್ಲಿ ಆರೋಗ್ಯ ಮತ್ತು ಪೋಷಣೆಗೆ ಸಂಬಂಧಿಸಿದ ತಿಳುವಳಿಕೆಯನ್ನು ಕೊಡಬೇಕು.
- ಅಂಗನವಾಡಿಗೆ ಬರುವ ತಂದೆ ತಾಯಿಯರನ್ನು ಕಂಡು ಅವರೊಡನೆ ಸಂಪರ್ಕ ಬೆಳೆಸುವುದು.
- ತೂಕದ ಕಾರ್ಡ್‌ಗಳು, ರಿಜಿಸ್ಟರ್‌ಗಳು, ಮಗುವಿನ ಆರೋಗ್ಯ, ಪೋಷಕಾಂಶಕ್ಕೆ ಸಂಬಂಧಿಸಿದ ದಾಖಲೆಗಳು, ಅಂಗನವಾಡಿ ಹಾಜರಿ ದಾಖಲೆಗಳು ಇವುಗಳನ್ನು ಬರೆದಿಟ್ಟು ಜನಸಮುದಾಯ ಸೇವೆಯ ಉಪಯೋಗವನ್ನು ಸರಿಯಾಗಿ ಪಡೆಯುತ್ತಿದೆಯೇ ಎಂದು ತಿಳಿಯುವಲ್ಲಿ ಸಹಕರಿಸುವುದು.
- ಗ್ರಾಮದ ಇತರ ಸಂಘ-ಸಂಸ್ಥೆಗಳಾದ ಪಂಚಾಯಿತಿ, ಮಹಿಳಾ ಮಂಡಳಿಗಳೊಡನೆ ಸಂಪರ್ಕ, ಶಾಲಾ ಉಪಾಧ್ಯಾಯರೊಡನೆ ಸಂಪರ್ಕ ಮತ್ತು ಕಾರ್ಯಕ್ರಮದ ಯಶಸ್ಸಿಗೆ ಅವರ ಸಹಕಾರ ಸಹಭಾಗಿತ್ವವನ್ನು ಕೋರುವುದು.
- 15-45 ವರ್ಷಗಳ ವಯಸ್ಸಿನ ಹೆಂಗಸರ ಅಕ್ಷರ ಕಲಿಕೆ ಕಾರ್ಯಕ್ರಮವನ್ನು ಏರ್ಪಡಿಸಿ ನಡೆಸುವುದು.

### ಅಂಗನವಾಡಿ ಸಹಾಯಕಿಯ ಕರ್ತವ್ಯಗಳು :

- ಮಕ್ಕಳಿಗೆ ಹಾಗೂ ತಾಯಂದಿರಿಗೆ ಆಹಾರವನ್ನು ಸಿದ್ಧಪಡಿಸುವುದು ಹಾಗೂ ನೀಡುವುದು.
- ಅಂಗನವಾಡಿ ಕೇಂದ್ರದ ಆವರಣವನ್ನು ಸ್ವಚ್ಛವಾಗಿರಿಸುವುದು ಹಾಗೂ ನೀರು ತರುವುದು.
- ಅತೀ ಚಿಕ್ಕ ಮಕ್ಕಳ ಸ್ವಚ್ಛತೆಯನ್ನು ಕಾಪಾಡುವುದು.
- ಗ್ರಾಮದ ಚಿಕ್ಕ ಮಕ್ಕಳನ್ನು ಮನೆಗಳಿಂದ ಅಂಗನವಾಡಿಗೆ ಕರೆತರುವುದು.
- ಅಂಗನವಾಡಿ ಕಾರ್ಯಕರ್ತೆಯರ ಗೈರು ಹಾಜರಿಯಲ್ಲಿ ಕೇಂದ್ರದ ಚಟುವಟಿಕೆ ನಡೆಸಿಕೊಂಡು ಹೋಗುವುದು.

ಅನುಬಂಧ-2

ಅಂಗನವಾಡಿ ಕಾರ್ಯಕರ್ತೆ, ಮಿನಿ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರಿಗೆ ನೀಡಲಾಗುತ್ತಿರುವ ಗೌರವಧನದ ವಿವರ (ರೂಪಾಯಿಗಳಲ್ಲಿ)

| ವಿವರ | ಕೇಂದ್ರ ಸರ್ಕಾರದ ಗೌರವಧನ | ರಾಜ್ಯ ಸರ್ಕಾರದ ಹೆಚ್ಚುವರಿ ಗೌರವಧನ | ಒಟ್ಟು |
|---|---|---|---|
| ಅಂಗನವಾಡಿ ಕಾರ್ಯಕರ್ತೆರಿಗೆ | 4500 | 5500 | 10000 |
| ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ | 3500 | 2750 | 6250 |
| ಅಂಗನವಾಡಿ ಸಹಾಯಕಿಯರಿಗೆ | 2500 | 2750 | 5250 |